# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಊಟ ಮತ್ತು ವಸತಿ ಸಹಾಯ ಯೋಜನೆಯ ಸೌಲಭ್ಯವನ್ನು ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ಅಲೆಮಾರಿ /ಅರೆ ಅಲೆಮಾರಿ ಅಭಿವೃದ್ಧಿ ಯೋಜನೆಯಡಿಯಲ್ಲಿ ಒದಗಿಸುವ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 516 ಬಿಎಂಎಸ್ 2013 ದಿನಾಂಕ 24-09-2013
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ: ಹಿಂವಕಇ:ಅಮಾಜ/ಸಿಆರ್-105/2013-14 ದಿನಾಂಕ:26-11-2013

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ದೊರಕದ ಹಾಗೂ ಮೆರಿಟ್ ಹೊಂದಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮಾಸಿಕ ತಲಾ ರೂ.1500/-ರಂತೆ ಶೈಕ್ಷಣಿಕ ಅವಧಿಯ 10 ತಿಂಗಳಿಗೆ ಒಟ್ಟು ರೂ.15000/-ಗಳನ್ನು ಊಟ ಮತ್ತು ವಸತಿ ಸಹಾಯ ಯೋಜನೆಯನ್ನು ಜಾರಿಗೊಳಿಸಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕ ಕಡತ ಮುಖೇನ ಪ್ರಸ್ತಾವನೆ ಸಲ್ಲಿಸಿ ಊಟ ಮತ್ತು ವಸತಿ ಸಹಾಯ ಯೋಜನೆಯ ಸೌಲಭ್ಯವನ್ನು ಅಲೆಮಾರಿ/ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಯೋಜನೆಯಡಿಯಲ್ಲಿ ವಿಸ್ತರಿಸುವ ಬಗ್ಗೆ ಸರ್ಕಾರದ ಆದೇಶ ಕೋರಿರುತ್ತಾರೆ.

ಅಲೆಮಾರಿ/ಅರೆ ಅಲೆಮಾರಿ ಜನಾಂಗದವರು ರಾಜ್ಯದ ಚಿತ್ರದುರ್ಗ, ದಾವಣಗೆರೆ, ಯಾದಗಿರಿ, ಗುಲ್ಬರ್ಗಾ, ಬೆಳಗಾಂ, ತುಮಕೂರು, ರಾಯಚೂರು, ಚಿಕ್ಕಬಳ್ಳಾಪುರ ಇತ್ಯಾದಿ ಜಿಲ್ಲೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿದ್ದು, ಈ ಜನಾಂಗಕ್ಕೆ ಸೇರಿದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶವನ್ನು ಕಲ್ಪಿಸಲು ಅರ್ಜಿ ಸಲ್ಲಿಸುತ್ತಿದ್ದು, ಅವರೆಲ್ಲರಿಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಹಾಲಿ ಇರುವ ಹಾಗೂ ಹೊಸದಾಗಿ ಮಂಜೂರಾಗಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಮೀಸಲಾತಿ ನೀಡಿ ನಿಯಮಗಳನ್ವಯ ಪ್ರವೇಶ ಕಲ್ಪಿಸಲು ಕಷ್ಟಕರವಾಗಿರುತ್ತದೆ. ಆದ್ದರಿಂದ, ಅಲೆಮಾರಿ/ಅರೆ ಅಲೆಮಾರಿ ಜನಾಂಗದವರು ಹಿಂದುಳಿದ ವರ್ಗಗಳಲ್ಲಿ ಇವರು ಅತ್ಯಂತ ಹಿಂದುಳಿದವರಾಗಿದ್ದು, ಅವರುಗಳ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದು ಅವಶ್ಯವಿರುತ್ತದೆ. ಆದ್ದರಿಂದ, ಇವರುಗಳು ಮುಂದೆ ಉತ್ತಮ ಉದ್ಯೋಗದಲ್ಲಿ ತೊಡಗಿಸಿಕೊಂಡು ಸಾಮಾಜಿಕ, ಶೈಕ್ಷಣಿಕ ಗುಣಮಟ್ಟದ ಜೀವನವನ್ನು ಉತ್ತಮಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಪ್ರಯತ್ನಿಸಲಾಗುತ್ತಿದೆ.

ಈ ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯವು ಪ್ರವರ್ಗ-1ಕ್ಕೆ ಶೇಕಡ 15 ರಷ್ಟು ಅನುದಾನವನ್ನು ಹಂಚಿಕೆ ಮಾಡಲಾಗುತ್ತಿದ್ದು, ರಾಜ್ಯದ ಅತ್ಯಂತ ಹಿಂದುಳಿದ ಅಲೆಮಾರಿ/ ಅರೆ

..2

ಅಲೆಮಾರಿ ಜನಾಂಗದ ವಿದ್ಯಾರ್ಥಿಗಳು ಪ್ರವರ್ಗ-1ರ ಇತರೆ ಜಾತಿಗಳ ವಿದ್ಯಾರ್ಥಿಗಳೊಂದಿಗೆ ಸ್ಪರ್ಧಿಸಿ ಈ ಸೌಲಭ್ಯವನ್ನು ಪಡೆಯುವುದು ಕಷ್ಟಕರವಾಗಿರುತ್ತದೆ. ಆದ್ದರಿಂದ, ಊಟ ಮತ್ತು ವಸತಿ ಸಹಾಯ ಯೋಜನೆಯಡಿಯಲ್ಲಿ ಅರ್ಜಿ ಸಲ್ಲಿಸಿರುವ ರಾಜ್ಯದ ಎಲ್ಲಾ ಜಿಲ್ಲೆಗಳ ಅರ್ಹ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಯೋಜನೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ನಿಗಧಿಪಡಿಸಿರುವ ಅನುದಾನದಲ್ಲಿ ಊಟ ಮತ್ತು ವಸತಿ ಸಹಾಯ ಯೋಜನೆಯ ಈ ಸೌಲಭ್ಯವನ್ನು ಮಾಸಿಕ ತಲಾ ಲರೂ.1500/- ರಂತೆ 10 ತಿಂಗಳ ಶೈಕ್ಷಣಿಕ ಅವಧಿಗೆ ತಲಾ ರೂ.15,000/-ಗಳನ್ನು ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೂ ಸಹ ವಿಸ್ತರಿಸಲು ಸರ್ಕಾರ ತೀರ್ಮಾನಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ:ಹಿಂವಕಇ 720 ಬಿಎಂಎಸ್ 2013</u>**

**<u>ಬೆಂಗಳೂರು ದಿನಾಂಕ: 17-12-2013.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸಿರುವ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಎಲ್ಲಾ ಅರ್ಹ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಯೋಜನೆಯ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿವೇತನಕ್ಕೆ ನಿಗಧಿಪಡಿಸಿರುವ ಅನುದಾನದಲ್ಲಿ ಊಟ ಮತ್ತು ವಸತಿ ಸಹಾಯ ಯೋಜನೆಯ ಈ ಸೌಲಭ್ಯವನ್ನು ಮಾಸಿಕ ತಲಾ ರೂ.1500/-(ರೂ. ಒಂದು ಸಾವಿರದ ಐದುನೂರು) ರಂತೆ 10 ತಿಂಗಳ ಶೈಕ್ಷಣಿಕ ಅವಧಿಗೆ ತಲಾ ರೂ.15000/- ಗಳನ್ನು ಸರ್ಕಾರದ ಆದೇಶ ಸಂಖ್ಯೆ ಹಿಂವಕ 516 ಬಿಎಂಎಸ್ 2013 ದಿನಾಂಕ 24-9-2013ರ ಆದೇಶದ ಮಾರ್ಗಸೂಚಿಗಳಿಗೆ ಒಳಪಟ್ಟು ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೂ ಸಹ ಪಾವತಿಸಲು ಆದೇಶಿಸಿದೆ.

ಇದಕ್ಕೆ ತಗಲುವ ವೆಚ್ಚವನ್ನು ರಾಜ್ಯ ವಲಯ ಯೋಜನೆ ಲೆಕ್ಕ ಶೀರ್ಷಿಕೆ:2225-03-102-0-12ರಡಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿ ಯೋಜನೆಯಲ್ಲಿ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿವೇತನಕ್ಕಾಗಿ ನಿಗದಿಪಡಿಸಿರುವ ಅನುದಾನದಡಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2013 ದಿನಾಂಕ:10/05/2013 ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಇವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಹೆಚ್.ಬಿ ರಘುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಗೆ.

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
5. ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು.

(3–5: ಆಯುಕ್ತರು, ಹಿಂ.ವ.ಕ.ಇ ಇವರ ಮುಖಾಂತರ)

6. ಸರ್ಕಾರದ ಅಧೀನ ಕಾರ್ಯದರ್ಶಿ,(ವೆಚ್ಚ-3) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತಕಾರ್ಯದರ್ಶಿ,
9. ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಪ್ತಕಾರ್ಯದರ್ಶಿ,
10. ಸರ್ಕಾರದ ಉಪ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಪ್ತ ಸಹಾಯಕರು,
11. ಕಛೇರಿ ಪ್ರತಿ/ಬಿಡಿ ಪ್ರತಿ.

ಸಂಖ್ಯೆ: ಹಿಂವಕನಿ: ಆಡಳಿತ-1: ಸಿಆರ್-105:2013-14

ಆಯುಕ್ತರ ಕಛೇರಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ನಂ.16/ಡಿ, 3ನೇ ಮಹಡಿ, ಡಿ.ದೇವರಾಜ ಅರಸುಭವನ
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ ವಸಂತನಗರ
ಬೆಂಗಳೂರು-52
ದಿನಾಂಕ:- 19/12/13.

ಉಪ ನಿರ್ದೇಶಕರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

ಪ್ರತಿಯನ್ನು

ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳ್ ಮಾಹಿತಿ ಹಾಗು ಸೂಕ್ತ ಕ್ರಮಕ್ಕೆ ಕಳುಹಿಸಿಕೊಡಲಾಗಿದೆ